# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಪಶ್ಚಿಮ ವಲಯ, ಶ್ರೀರಾಮಮಂದಿರ ಉಪವಿಭಾಗ

### ವಾರ್ಡ್ ನಂ.98 : ಪ್ರಕಾಶ್ ನಗರ

**ದಿನಾಂಕ: 03.07.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಎಂ.ಬಿ.ನಾಗರಾಜು, ನೋಡಲ್ ಅಧಿಕಾರಿ, ವಾರ್ಡ್ 98 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು, ವಾರ್ಡ್ 98ರ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಎಂ.ಬಿ.ನಾಗರಾಜು | ನೋಡಲ್ ಅಧಿಕಾರಿ-ವಾರ್ಡ್ 98 |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 98 |
| 3 | ಡಾ.ಶೀಲಾ | ಆರೋಗ್ಯ ಅಧಿಕಾರಿ, PHC ಪ್ರಕಾಶ್ ನಗರ |
| 4 | ಕವಿತ ಬಿ.ಎಲ್ | ಶುಶ್ರೂಷಕಿ, PHC ಪ್ರಕಾಶ್ ನಗರ |
| 5 | ರಮೇಶ್ ಎಂ | ಕಂದಾಯ ವಸೂಲಿಗಾರರು |
| 6 | ಆರ್ ನರಸಿಂಹ | ಬಿ.ಡಬ್ಲ್ಯೂ.ಎಸ್.ಎಸ್,ಬಿ |
| 8 | ಪದ್ಮನಾಭ ಎಸ್.ವಿ | ಎನ್.ಜಿ.ಓ |
| 9 | ಜೆ.ಶ್ರೀನಿವಾಸ್ | ಎನ್.ಜಿ.ಓ |
| 10 | ಬಿ.ಎಸ್.ಪ್ರವೀಣ್ ಕುಮಾರ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |

:ನಡಾವಳಿಯ ವರದಿ:

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಮಂಜುನಾಥ್ ಡಿ.ಎಸ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್‌ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಮತ್ತು ವಾರ್ಡ್ ಕಮಿಟಿ ಸದಸ್ಯರಿಗೆ ಸ್ವಾಗತ ಕೋರಿದರು.

- **ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ**
  - ದಿನಾಂಕ:06/06/2021 ರಿಂದ 03/07/2021ರವರೆಗಿನ ಲಸಿಕಾಕರಣ ಹಾಗೂ ಕೋವಿಡ್ ತಪಾಸಣೆಗಾಗಿ ಸಂಬಂಧಿಸಿದ ವಿವರಗಳನ್ನು ಸಭೆಯಲ್ಲಿ ತಿಳಿಸಲಾಯಿತು.
  - ಶ್ರೀ ಎಂ.ಬಿ.ನಾಗರಾಜು, ನೋಡಲ್ ಅಧಿಕಾರಿರವರು ಮಾತನಾಡಿ ಕೋವಿಡ್ ಸೋಂಕು ವಾರ್ಡ್ ವ್ಯಾಪ್ತಿಯಲ್ಲಿ ಬೆರಳಣಿಕೆಯಲ್ಲಿ ಸೋಂಕು ಪತ್ತೆಯಾಗುತ್ತಿದ್ದು, ಇಳಿಕೆ ಕಾಣುತ್ತಿದ್ದರೂ ಸಹ ಮಾಸ್ಕ್ ಧರಿಸುವ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು ಹಾಗೂ ಸಾರ್ವಜನಿಕರಲ್ಲಿ ಲಸಿಕೆ ಹಾಕಿಸಿಕೊಳ್ಳುವ ಬಗ್ಗೆ ಹೆಚ್ಚಿನ ಪ್ರಚಾರ ಕೈಗೊಂಡು ಅರಿವು ಮೂಡಿಸುವಂತೆ ಸೂಚಿಸಿದರು.

- ಶ್ರೀ ಎಂ.ಬಿ.ನಾಗರಾಜು, ನೋಡಲ್ ಅಧಿಕಾರಿರವರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನುದ್ದೇಶಿಸಿ ಮಾತನಾಡಿ, ಕೋವಿಡ್-19ಗೆ ಸಂಬಂಧಪಟ್ಟಂತೆ ಸರಬರಾಜು ಮಾಡಲಾಗುವ ವ್ಯಾಕ್ಸಿನ್‌ಗಳು, ಮೆಡಿಕಲ್ ಕಿಟ್ ಗಳು ಹಾಗೂ ಇನ್ನಿತರ ವಿವರಗಳನ್ನು ವಹಿಗಳಲ್ಲಿ ತಪ್ಪದೇ ದಾಖಲಿಸಿ, ವಹಿಗಳನ್ನು ಸಮರ್ಪಕವಾಗಿ ನಿರ್ವಹಿಸಿ ದಾಖಲೆಗಳನ್ನು ಇಟ್ಟುಕೊಳ್ಳಲು ಸೂಚಿಸಿದರು.ಎಲ್ಲಾ ಸಮಿತಿ ಸದಸ್ಯರುಗಳು/ ಅಧಿಕಾರಿಗಳು/ WDC ಸದಸ್ಯರುಗಳು ವಾರ್ಡ್‌ನ ವ್ಯಾಪ್ತಿಯಲ್ಲಿ ಕೋವಿಡ್-19 ಪಿಡುಗನ್ನು ತಡೆಗಟ್ಟಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಲು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**BBMP SAHAYA APP:**

- ಡಿ.ಎಸ್.ಮಂಜುನಾಥ್ ಸಹಾಯಕ ಅಭಿಯಂತರರು, ವಾರ್ಡ್ ನಂ.98 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ಕೋವಿಡ್-19 ಸಾಂಕ್ರಾಮಿಕವನ್ನು ವಾರ್ಡ್ ಮಟ್ಟದಲ್ಲಿಯೇ ಪರಿಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ-ವಾರ್ಡ್ 98 ಹಾಗೂ**
**ಸಹಾಯಕ ಅಭಿಯಂತರರು,**

(ಶ್ರೀ ಎಂ.ಬಿ.ನಾಗರಾಜು)
**ನೋಡಲ್ ಅಧಿಕಾರಿ ವಾರ್ಡ್-98**

ಪ್ರತಿಯನ್ನು:

1) ಮಾನ್ಯ ವಲಯ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಜಂಟಿ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ರಾಜಾಜಿನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶ್ರೀರಾಮಮಂದಿರ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.98 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜಾಜಿನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ
9) ಕಛೇರಿ ಕಡತಕ್ಕೆ